ಅ) ಈ ಅಂಗಡಿಗಳು ಹಾಗೂ ಮಳಿಗೆಗಳ ಮಾಲೀಕರು ಪ್ರತಿವರ್ಷ ಲೈಸನಸ್ಸು ಸವೀಕರಿಸಬೇಕಾಗುವುದು ನಿಜವಲ್ಲವೇ.

ಇ) ಹಾಗಿದ್ದಲ್ಲಿ ಅಂಗಡಿ ಮಾಲೀಕರಿಗೆ ಕಿರುಕುಳ ಹಾಗೂ ಈ ಪದ್ಧತಿ ಭ್ರಷ್ಟಾಚಾರಕ್ಕೆ ಎಡೆ ಮಾಡಿಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಈ ದಿಸೆಯಲ್ಲಿ ಐದು ವರ್ಷಗಳಿಗೊಮ್ಮೆ ಅಂಗಡಿ ಹಾಗೂ ಮಳಿಗೆಗಳ ಲೈಸನ್ಸ್‌ಗಳನ್ನು ನವೀಕರಿಸುವ ಪದ್ಧತಿಯನ್ನು ಸರ್ಕಾರ ಜಾರಿಗೊಳಿಸಲಾಗುವುದೆ?

ಶ್ರೀ ಬ್ಲೇಸಿಯಸ್ ಎಂ. ಡಿಸೋಜಾ (ಕಾರ್ಮಿಕ ಸಚಿವರು) :

ಅ) 1992ನೇ ಸಾಲಿನ ಅಂತ್ಯಕ್ಕೆ 1,62,330 ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳು ನೊಂದಾಯಿಸಲ್ಪಟ್ಟಿವೆ.

ಆ) ಹೌದು.

ಇ) ಇಲ್ಲ.

ಈ) ಇಲ್ಲ.

ಮಲೆನಾಡು ತಾಲ್ಲೂಕುಗಳಲ್ಲಿ ಕಟ್ಟುವ ಆಶ್ರಯ ಯೋಜನೆ. ಮನೆಗಳಿಗೆ ಹಣ ಹೆಚ್ಚು ಮಾಡುವ ಬಗ್ಗೆ.

346 - ಶ್ರೀಮತಿ ಮೋಟಮ್ಮ (ಮೂಡಿಗೆರೆ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಲೆನಾಡು ತಾಲ್ಲೂಕುಗಳಲ್ಲಿ ಆಶ್ರಯ ಯೋಜನೆಯಡಿಯಲ್ಲಿ 15,000 ರೂ.ಗಳಲ್ಲಿ ಗಟ್ಟಿಯಾದ ಮನೆ ಕಟ್ಟಲು ಸಾಧ್ಯವಾಗುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ಉದಾ: ಮೂಡಿಗೆರೆ ತಾಲ್ಲೂಕು).

ಆ) ಹಾಗಿದ್ದಲ್ಲಿ ಗಟ್ಟಿಯಾದ ಮನೆ ಕಟ್ಟಲು ರೂ. 15,000 ರಿಂದ 20,000 ರೂ. ಗಳಿಗೆ ಹೆಚ್ಚಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೇ? ಶ್ರೀ ಗೋಪಿನಾಥ್ ಆರ್. ಸಾಂದ್ರ (ವಸತಿ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಕರ್ನಾಟಕ ಗೃಹ ನಿರ್ಮಾಣ ಮಂಡಳಿಯ ವತಿಯಿಂದ 2500 ಮೂಲೆ ನಿವೇಶಗಳನ್ನು ಹರಾಜು.

231 - ಶ್ರೀ ಆರ್. ದಯಾನಂದರಾವ್ (ಗಾಂಧಿನಗರ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕರ್ನಾಟಕ ಗೃಹ ಮಂಡಲಿಯು 2500 ಮೂಲೆ ನಿವೇಶನಗಳನ್ನು ಹರಾಜು ಮಾಡಲು ನಿರ್ಧರಿಸಿದೆಯೇ?

ಆ) ಹಾಗಿದ್ದಲ್ಲಿ, ಬೆಂಗಳೂರು ನಗರದಲ್ಲಿ ಎಷ್ಟು ಮೂಲೆ ನಿವೇಶನಗಳನ್ನು ಹರಾಜು ಮಾಡಲಾಗುವುದು?

ಇ) ಈ ರೀತಿ ಮೂಲೆ ನಿವೇಶನಗಳನ್ನು ಹರಾಜು ಮಾಡುವ ಉದ್ದೇಶವೇನು?

ಶ್ರೀ ಗೋಪಿನಾಥ್ ಆರ್. ಸಾಂದ್ರ (ವಸತಿ ಸಚಿವರು) :

ಅ) ಕರ್ನಾಟಕ ಗೃಹ ಮಂಡಳಿಯಲ್ಲಿ ಇಲ್ಲಿಯವರೆಗೆ ಗುರುತಿಸಲಾದ ಎಲ್ಲಾ ಖಾಲಿ ಮೂಲೆ ನಿವೇಶನಗಳನ್ನು ಹರಾಜು ಮಾಡಲು ನಿರ್ಧರಿಸಲಾಗಿದೆ.